**ಕರ್ನಾಟಕ ಸರ್ಕಾರ**
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**

**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

**ಸಂಖ್ಯೆ : ವಾಇ : ಉ ನಿ : ಸುಮಪ : 2017-18** **ದಿನಾಂಕ: 08-07-2017**

# ಪತ್ರಿಕಾ ಆಮಂತ್ರಣ

1. ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಇಲಾಖೆ ವತಿಯಿಂದ

ವನಮಹೋತ್ಸವ – 2017 ಕರ್ನಾಟಕ ರಾಜ್ಯಾದ್ಯಂತ ಬೃಹತ್ ಗಿಡ ನೆಡುವ ಕಾರ್ಯಕ್ರಮ.

ಉದ್ಘಾಟನೆ:
ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ
ಘನ ಉಪಸ್ಥಿತಿ:
ಡಿ.ವಿ. ಸದಾನಂದ ಗೌಡ, ಕೇಂದ್ರದ ಸಾಂಖ್ಯಿಕ ಮತ್ತು ಕಾರ್ಯಕ್ರಮ ಅನುಷ್ಠಾನ ಸಚಿವರು.
ಅನಂತ ಕುಮಾರ್, ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಹಾಗೂ ಸಂಸದೀಯ ವ್ಯವಹಾರಗಳ ಸಚಿವರು.
ಬಿ. ರಮಾನಾಥ ರೈ, ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು.
ಅಧ್ಯಕ್ಷತೆ:
ದಿನೇಶ್ ಗುಂಡೂರಾವ್, ವಿಧಾನಸಭಾ ಸದಸ್ಯರು, ಗಾಂಧಿನಗರ ವಿಧಾನಸಭಾ ಕ್ಷೇತ್ರ.
ದಿನಾಂಕ: 09–07–2017, ಭಾನುವಾರ ಸಮಯ: ಬೆಳಿಗ್ಗೆ 10.00 ಗಂಟೆಗೆ
ಸ್ಥಳ: ಸ್ವಾತಂತ್ರ್ಯ ಉದ್ಯಾನವನ (ಫ್ರೀಡಂ ಪಾರ್ಕ್), ಶೇಷಾದ್ರಿ ರಸ್ತೆ, ಗಾಂಧಿನಗರ–560 009

2. "ಬೆಳ್ಳಿ ಹೆಜ್ಜೆ" ಯಲ್ಲಿ ನಮ್ಮೊಂದಿಗೆ ಪಿ. ಶೇಷಾದ್ರಿ ಅವರೊಂದಿಗೆ ಸಂವಾದ

ಮುಖ್ಯ ಅತಿಥಿಗಳು:
ಡಾ. ಜಯಮಾಲಾ, ವಿಧಾನ ಪರಿಷತ್ ಸದಸ್ಯರು ಹಾಗೂ ಹಿರಿಯ ಕಲಾವಿದರು.
ಗಿರೀಶ್ ಕಾಸರವಳ್ಳಿ, ಪದ್ಮಶ್ರೀ ಪುರಸ್ಕೃತ ಚಲನಚಿತ್ರ ನಿರ್ದೇಶಕರು,
ಎನ್.ಆರ್. ವಿಶುಕುಮಾರ್, ನಿರ್ದೇಶಕರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ.
ಸಾ.ರಾ. ಗೋವಿಂದು, ಅಧ್ಯಕ್ಷರು, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ,

ಅಧ್ಯಕ್ಷತೆ:

ಎಸ್.ವಿ. ರಾಜೇಂದ್ರಸಿಂಗ್ ಬಾಬು, ಅಧ್ಯಕ್ಷರು, ಕರ್ನಾಟಕ ಚಲನಚಿತ್ರ ಅಕಾಡೆಮಿ.

ದಿನಾಂಕ: 10-07-2017, ಸೋಮವಾರ ಸಮಯ : ಸಂಜೆ 5-00 ಗಂಟೆಗೆ

ಸ್ಥಳ: ಮಹದೇವ ದೇಸಾಯಿ ಸಭಾಂಗಣ, ಗಾಂಧಿ ಭವನ, ಕುಮಾರ ಪಾರ್ಕ್ ರಸ್ತೆ, ಬೆಂಗಳೂರು.

3. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯು ರಾಷ್ಟ್ರೀಯ ಸಂತಕವಿ ಕನಕದಾಸ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ಮೂಲಕ ಹೊರತಂದ 32 ಸಂಪುಟಗಳ ಲೋಕಾರ್ಪಣೆ

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ.
ದಿನಾಂಕ: 10-07-2017, ಸೋಮವಾರ ಸಮಯ : ಸಂಜೆ 6.00 ಗಂಟೆಗೆ.
ಸ್ಥಳ: ರವೀಂದ್ರ ಕಲಾಕ್ಷೇತ್ರ, ಜೆ.ಸಿ. ರಸ್ತೆ, ಬೆಂಗಳೂರು.

4.ಪತ್ರಿಕಾಗೋಷ್ಠಿ:

ಕರ್ನಾಟಕ ರಾಜ್ಯ "ಹಿರಿಯ ಪೊಲೀಸ್ ಅಧಿಕಾರಿಗಳ ಪರಿಶೀಲನಾ ಸಭೆ'ಯ ನಂತರ ಪತ್ರಿಕಾಗೋಷ್ಠಿ

ಮುಖ್ಯ ಅತಿಥಿ:

ಸಿದ್ದರಾಮಯ್ಯ, ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ

ದಿನಾಂಕ: 10-07-2017, ಸೋಮವಾರ ಸಮಯ : ಮಧ್ಯಾಹ್ನ 12.30 ಗಂಟೆಗೆ
ಸ್ಥಳ: ಮಹಾ ನಿರ್ದೇಶಕರು ಮತ್ತು ಆರಕ್ಷಕ ಮಹಾ ನಿರೀಕ್ಷಕರವರ ಕಚೇರಿ, ಕರ್ನಾಟಕ ರಾಜ್ಯ, ಬೆಂಗಳೂರು.

# ಪತ್ರಿಕಾ ಪ್ರಕಟಣೆ

## ಜುಲೈ 21 ರಿಂದ 23ರ ವರೆಗೆ ಬೆಂಗಳೂರಿನಲ್ಲಿ ಅಂಬೇಡ್ಕರ್ ಕುರಿತು ಅಂತಾರಾಷ್ಟ್ರೀಯ ಸಮ್ಮೇಳನ

ಬೆಂಗಳೂರು, ಜುಲೈ 8 (ಕರ್ನಾಟಕ ವಾರ್ತೆ)–

ಡಾ. ಬಿ.ಆರ್. ಅಂಬೇಡ್ಕರ್ ಅವರ 126ನೇ ಜನ್ಮದಿನಾಚರಣೆ ಪ್ರಯುಕ್ತ ಕರ್ನಾಟಕ ಸರ್ಕಾರವು ಜುಲೈ 21 ರಿಂದ 23ರ ವರೆಗೆ ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯದ ಜಿಕೆವಿಕೆ ಆವರಣದಲ್ಲಿರುವ ಸಮಾವೇಶ ಕೇಂದ್ರದಲ್ಲಿ **Reclaimin Social Justice, Revisiting Ambedker** ಎಂಬ ವಿಷಯದ ಕುರಿತು ಅಂತಾರಾಷ್ಟ್ರೀಯ ಸಮ್ಮೇಳನವನ್ನು ಏರ್ಪಡಿಸಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರು ಇಂದು ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ಸಮ್ಮೇಳನದ ಲಾಂಛನ ಬಿಡುಗಡೆ ಮಾಡಿ, ಪತ್ರಿಕಾಗೋಷ್ಠಿಯಲ್ಲಿ ಸಮ್ಮೇಳನದ ವಿವರಗಳನ್ನು ನೀಡಿದರು. ಈ ಸಮ್ಮೇಳನದಲ್ಲಿ ಸುಮಾರು 2000ಕ್ಕೂ ಹೆಚ್ಚು ಆಹ್ವಾನಿತರು ಭಾಗವಹಿಸಲಿದ್ದು, 83 ಅಂತಾರಾಷ್ಟ್ರೀಯ, 149 ರಾಷ್ಟ್ರೀಯ ಮತ್ತು 80 ರಾಜ್ಯದ ಭಾಷಣಕಾರರು ವಿಷಯ ಮಂಡಿಸಲಿದ್ದಾರೆ. ಉದ್ಘಾಟನೆಯ ದಿನದಲ್ಲಿ ಮಾನವ ಹಕ್ಕುಗಳ ವಕೀಲ ಮತ್ತು ಕಾರ್ಯಕರ್ತ ಮಾರ್ಟಿನ್ ಲೂಥರ್ ಕಿಂಗ್–3 ಮತ್ತು ಸಂಸತ್ ಸದಸ್ಯ ರಾಹುಲ್ ಗಾಂಧಿ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದು ಅವರು ತಿಳಿಸಿದರು.

ವಿವಿಧ ಹಂತಗಳಲ್ಲಿ ಸಾಮಾಜಿಕ, ರಾಜಕೀಯ ಮತ್ತು ಆರ್ಥಿಕ ನ್ಯಾಯದ ಮೇಲೆ ದಬ್ಬಾಳಿಕೆ ನಡೆಯುತ್ತಿರುವ ಸಂದರ್ಭದಲ್ಲಿ ಈ ಸಮ್ಮೇಳನವು ನಡೆಯುತ್ತಿದ್ದು, ವಿವಿಧ ಪದರಗಳಲ್ಲಿ ಮಡುಗಟ್ಟಿರುವ ಅಸಮಾನತೆ, ವೈವಿಧ್ಯತೆ, ಬಹಿಷ್ಕಾರ ಮತ್ತು ಶೋಷಣೆಯನ್ನೊಳಗೊಂಡ ಸಮಾಜಕ್ಕಾಗಿ ಸಾಮಾಜಿಕ ನ್ಯಾಯದ ಪರಿಕಲ್ಪನೆಯ ಅನ್ವೇಷಣೆ, ಸಾಮಾಜಿಕ ನ್ಯಾಯಕ್ಕಾಗಿ ಸಾಂವಿಧಾನಿಕ, ಸಾಂಸ್ಥಿಕ ಮತ್ತು ನೀತಿ ನಿರೂಪಣೆ ಮತ್ತು ಸಾಮಾಜಿಕ ನ್ಯಾಯ ಮತ್ತು ಪೂರಕ ಮಾನದಂಡಗಳು, ಕಾಳಜಿಗಳ ನಡುವಣ ಸೇತುವೆಯಾಗುವುದು ಈ ಸಮ್ಮೇಳನದ ಉದ್ದೇಶವಾಗಿದೆ ಎಂದು ಮುಖ್ಯಮಂತ್ರಿಗಳು ವಿವರಿಸಿದರು.

ಈ ಸಮ್ಮೇಳನವು ಸಾಮಾಜಿಕ ನ್ಯಾಯದ ಪರಿಕಲ್ಪನೆ, ಸಾಮಾಜಿಕ ನ್ಯಾಯ ಮತ್ತು ಸಾಮಾಜಿಕ ಸನ್ನಿವೇಶ, ಆರ್ಥಿಕ ನ್ಯಾಯ ಹಾಗೂ ಸಾಮಾಜಿಕ ನ್ಯಾಯ ಮತ್ತು ಸಾಂಸ್ಕೃತಿ ಪ್ರಭಾವ ವಲಯ ಎಂಬ ವಿಷಯಗಳ ಕುರಿತು ಬೆಳಕು ಚೆಲ್ಲಲಿದೆ. 1938ರಲ್ಲಿ ಯೋಜನಾ ಸಮಿತಿಯು ಮಾಡಿರುವ ಘೋಷಣೆಯ ಮಾದರಿಯಲ್ಲಿಯೇ ಸಮ್ಮೇಳನದ ಅಂತ್ಯದಲ್ಲಿ ಬೆಂಗಳೂರು ಘೋಷಣೆ ಮಾಡಲಾಗುವುದು. ಸಾಮಾಜಿಕ ನ್ಯಾಯ, ಮಾನವ ಹಕ್ಕುಗಳು, ಸ್ವಾತಂತ್ರ್ಯ ಮತ್ತು ಪ್ರಜಾಪ್ರಭುತ್ವದ ಕಾಳಜಿಗೆ ನಿರ್ದಿಷ್ಟ ಸಾಂವಿಧಾನಿಕ, ಸಾಂಸ್ಥಿಕ ಮತ್ತು ನೀತಿ ಪ್ರತಿಕ್ರಿಯೆಗಳನ್ನು ರೂಪಿಸುವ ಬೆಂಗಳೂರು ಘೋಷಣೆಯನ್ನು ಕರ್ನಾಟಕ ಸರ್ಕಾರವು ಮಾಡಲಿದೆ ಎಂದು ಅವರು ತಿಳಿಸಿದರು.

ಎಲ್ಲಾ ಪ್ರಗತಿಶೀಲ ಪ್ರಜಾಸತ್ತಾತ್ಮಕ ಭಾರತವನ್ನು ಸಂರಕ್ಷಿಸಲು ಬದ್ಧವಾಗಿರುವ ಪ್ರಗತಿ ಪರ ಶಕ್ತಿಗಳಿಗೆ, ಆಶಯಗಳಿಗೆ ಈ ಸಮ್ಮೇಳನ ವೇದಿಕೆ ಒದಗಿಸಲಿದೆ ಎಂದು ತಿಳಿಸಿದರು. ಪ್ರೊ. ಕಾರ್ನೆಲ್ ವೆಸ್ಟ್, ಪ್ರೊ. ಎಸ್.ಕೆ. ಥೋರಟ್, ಲಾರ್ಡ್ ಭೀಖು ಪಾರೇಖ್, ಕೆ. ರಾಜು, ಪ್ರೊ. ರಾಜೀವ್ ಗೌಡ, ಪ್ರೊ. ದೀಪಕ್ ನಯ್ಯರ್, ಡಾ. ರಾಮಚಂದ್ರ ಗುಹ, ಪ್ರೊ. ವೆಲೇರಿಯನ್ ರಾಡ್ರಿಗಸ್, ಪ್ರೊ. ಉಪೇಂದ್ರ ಬಕ್ಷಿ, ಪ್ರೊ. ಆಶೀಷ್ ನಂದಿ, ಪ್ರೊ. ಶಿವ್ ವಿಶ್ವನಾಥನ್, ಪ್ರೊ. ಸುಧೀರ್ ಕೃಷ್ಣಸ್ವಾಮಿ, ಪ್ರೊ. ಥಾಮಸ್ ವೆಸ್‌ಕಾಪ್, ಡಾ. ಗ್ಯಾರಿ ಮೈಕೆಲ್ ಟಾರ್ಟಾಕೊವ್, ಪ್ರೊ. ಸುರಿಂದರ್ ಜೋಧ್ಕಾ, ಪ್ರೊ. ಕಲ್ಪನಾ ಕಣ್ಣಬೀರನ್, ಡಾ. ಶಶಿ ತರೂರ್, ಪ್ರಕಾಶ್ ಅಂಬೇಡ್ಕರ್, ಕೇಂದ್ರದ ಮಾಜಿ ಸಚಿವ ಜೈರಾಮ್ ರಮೇಶ್ ಸೇರಿದಂತೆ ಹಲವಾರು ರಾಷ್ಟ್ರೀಯ ಅಂತಾರಾಷ್ಟ್ರೀಯ ಭಾಷಣಕಾರರು ಭಾಗವಹಿಸಲಿದ್ದಾರೆ. ಜೊತೆಗೆ ಸಮ್ಮೇಳನದ ಕೊನೆಯ ದಿನದಂದು ತಾವು ಕರ್ನಾಟಕದ ಪ್ರಗತಿಪರ ಚಿಂತಕರೊಂದಿಗೆ ಸಂವಾದ ನಡೆಸಲಿರುವುದಾಗಿ ಮುಖ್ಯಮಂತ್ರಿಗಳು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಲೋಕೋಪಯೋಗಿ ಸಚಿವ ಡಾ. ಹೆಚ್.ಸಿ. ಮಹದೇವಪ್ಪ, ಸಮಾಜ ಕಲ್ಯಾಣ ಸಚಿವ ಶ್ರೀ ಹೆಚ್. ಆಂಜನೇಯ, ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಶ್ರೀ ಟಿ.ಬಿ. ಜಯಚಂದ್ರ, ಕೃಷಿ ಸಚಿವ ಶ್ರೀ ಕೃಷ್ಣ ಬೈರೇಗೌಡ, ಐಟಿ ಬಿಟಿ ಮತ್ತು ಪ್ರವಾಸೋದ್ಯಮ ಸಚಿವ ಶ್ರೀ ಪ್ರಿಯಾಂಕ್ ಎಂ. ಖರ್ಗೆ, ಸಂಸತ್ ಸದಸ್ಯ ಪ್ರೊ. ರಾಜೀವ್ ಗೌಡ, ಸಮಾಜ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಪಿ. ಮಣಿವಣ್ಣನ್ ಮೊದಲಾದವರು ಹಾಜರಿದ್ದರು.

ಸಮ್ಮೇಳನದಲ್ಲಿ ಭಾಗವಹಿಸಲು ನೋಂದಣಿಗಾಗಿ ಹಾಗೂ ಸಮ್ಮೇಳನದ ಕುರಿತ ಹೆಚ್ಚಿನ ಮಾಹಿತಿಗಾ **www.questforequity.org**, **www.facebook.com/questforequity** ಮತ್ತು ಟ್ವಿಟ್ಟರ್ ಖಾತೆ **www.twitter.com/quest4equity/quest4equity** ಯನ್ನು ಸಂಪರ್ಕಿಸಬಹುದು.

ಸಹನ/ಕೆಎಂ

## ನ್ಯಾಯಾಂಗ ವ್ಯವಸ್ಥೆಗೆ ಮೂಲಸೌಕರ್ಯ: ರಾಜ್ಯ ಸರ್ಕಾರ ಬದ್ಧ

ಬೆಂಗಳೂರು, ಜು, 8(ಕರ್ನಾಟಕ ವಾರ್ತೆ) : ರಾಜ್ಯದ ನ್ಯಾಯಾಂಗ ವ್ಯವಸ್ಥೆ ಹೆಚ್ಚು ಪರಿಣಾಮಕಾರಿಯಾಗಿ ಕೆಲಸ ಮಾಡಬೇಕಾದರೆ ಅದಕ್ಕೆ ಅಗತ್ಯ ಮೂಲಭೂತಸೌಕರ್ಯ

ಒದಗಿಸುವುದು ಅತ್ಯಗತ್ಯವಾಗಿದ್ದು, ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಕಳೆದ ನಾಲ್ಕು ವರ್ಷಗಳಲ್ಲಿ ಪ್ರಾಮಾಣಿಕ ಪ್ರಯತ್ನ ಮಾಡಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಿಳಿಸಿದರು.

ಅವರಿಂದು ಬೈಯಪ್ಪನಹಳ್ಳಿಯ ಎನ್‌ಜಿಇಎಫ್ ಲೇಔಟ್‌ನಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ಸಿಬ್ಬಂದಿ ವಸತಿ ಸಮುಚ್ಚಯ ಉದ್ಘಾಟಿಸಿ ಮಾತನ್ನಾಡುತ್ತಾ, ಕಳೆದ ನಾಲ್ಕು ವರ್ಷಗಳಲ್ಲಿ 333 ನ್ಯಾಯಾಲಯ ಕಟ್ಟಡ ಮತ್ತು ನ್ಯಾಯಾಂಗ ಸಿಬ್ಬಂದಿ ವರ್ಗದವರ 675 ವಸತಿ ಗೃಹ ಸೇರಿದಂತೆ ಈಗಾಗಲೇ ಪೂರ್ಣಗೊಂಡಿರುವ 192 ವಸತಿ ಗೃಹಗಳನ್ನು ನಿರ್ಮಿಸಲಾಗಿದ್ದು, ಇದಕ್ಕೆ ಸುಮಾರು 1500ಕೋಟಿ ರೂಗಳನ್ನು ಖರ್ಚುಮಾಡಲಾಗಿದೆ ಎಂದರು.

ನಮ್ಮ ಸರ್ಕಾರ ಅಧಿಕಾರಕ್ಕೆ ಬಂದ ಮೇಲೆ ರಸ್ತೆಗಳು, ಸೇತುವೆಗಳು, ಕಟ್ಟಡಗಳನ್ನು ಆದ್ಯತೆಯ ಮೇರೆಗೆ ಲೋಕೋಪಯೋಗಿ ಇಲಾಖೆ ಮೂಲಕ ನಿರ್ಮಿಸಿದ್ದೇವೆ. ಯಾವುದೇ ಸಮಾಜದ ಆರ್ಥಿಕ ಬೆಳವಣಿಗೆಯಾಗಬೇಕಾದರೆ ಮೂಲಭೂತ ಸೌಕರ್ಯ ಅತ್ಯಗತ್ಯ ಎಂಬುದನ್ನು ನಮ್ಮ ಸರ್ಕಾರ ಮನಗಂಡಿದೆ ಎಂದು ಅವರು ತಿಳಿಸಿದರು.

ನ್ಯಾಯಾಂಗ ಇಲಾಖೆಯ ಯೋಜನೆಗಳಿಗೆ ಕೇಂದ್ರ ಸರ್ಕಾರ 1016 ಕೋಟಿ ರೂಗಳ ಪೈಕಿ 463 ಕೋಟಿ ರೂಗಳನ್ನಷ್ಟೇ ನೀಡಿದೆ. ಆದರೆ ಕೇಂದ್ರದ ನೆರವಿಗೆ ಕಾಯದೆ ರಾಜ್ಯ ಸರ್ಕಾರ ತನ್ನ ಖಜಾನೆಯಿಂದ ಹಣ ಭರಿಸಿ ಕೋರ್ಟ್ ಕಟ್ಟಡಗಳನ್ನು ನಿರ್ಮಿಸಿದೆ ಎಂದು ಮುಖ್ಯಮಂತ್ರಿಗಳು ತಿಳಿಸಿದರು.

191 ಕೋಟಿ ರೂ. ವೆಚ್ಚದಲ್ಲಿ ನಿರ್ಮಿಸಲಾಗಿರುವ ಕರ್ನಾಟಕ ಉಚ್ಚ ನ್ಯಾಯಾಲಯದ ಸಿಬ್ಬಂದಿ ವಸತಿ ಗೃಹ ಒಂಭತ್ತು ಅಂತಸ್ತಿನ ಅತಿ ದೊಡ್ಡ ವಸತಿ ಸಮುಚ್ಚಯವಾಗಿದ್ದು, ಇದರಲ್ಲಿ ಲಿಫ್ಟ್ ಸೌಲಭ್ಯ, ಮಳೆನೀರು ಕೊಯಿಲು ವ್ಯವಸ್ಥೆ ಮಾಡಲಾಗಿದೆ, ತ್ಯಾಜ್ಯ ನೀರು ಸಂಸ್ಕರಣಾ ಘಟಕವನ್ನೂ ಸಹ ಒಳಗೊಂಡ ಈ ವಸತಿ ಸಮುಚ್ಚಯ ದೇಶಕ್ಕೆ ಪ್ರಥಮ ಎನಿಸಿದೆ ಎಂದರು.

ಲೋಕೋಪಯೋಗಿ ಸಚಿವ ಡಾ: ಹೆಚ್.ಸಿ. ಮಹದೇವಪ್ಪ ಅವರು ಮಾತನಾಡಿ ಕಳೆದ ನಾಲ್ಕು ವರ್ಷದ ಅವಧಿಯಲ್ಲಿ 1500 ಕೋಟಿ ರೂ. ಅಂದಾಜಿನಲ್ಲಿ ವಿವಿಧ ನ್ಯಾಯಾಲಯ ಕಟ್ಟಡಗಳನ್ನು ಸ್ಥಾಪಿಸಲಾಗಿದ್ದು, ನ್ಯಾಯಾಂಗ ವ್ಯವಸ್ಥೆಯ ಮೂಲ ಸೌಕರ್ಯ ಕಲ್ಪಸುವಲ್ಲಿ ರಾಜ್ಯ ಸರ್ಕಾರ ದೇಶದಲ್ಲಿಯೇ ಎರಡನೇ ಸ್ಥಾನದಲ್ಲಿದೆ ಎಂದರು.

ನ್ಯಾಯಾಂಗ ಇಲಾಖೆಯ ಸಿಬ್ಬಂದಿಯ ಈ ವಸತಿ ಸಮುಚ್ಛಯವನ್ನು 2014 ರಲ್ಲಿ ಕಟ್ಟಲು ಪ್ರಾರಂಭಿಸಿ 2017 ರಲ್ಲಿ ಪೂರ್ಣಗೊಳಿಸಿ ನಾವೇ ಇಂದು ಉದ್ಘಾಟನೆ ಮಾಡುತ್ತಿರುವುದು ಸಂತಸ ತಂದಿದೆ ಎಂದ ಅವರು, ಈ ವಸತಿ ಸಮುಚ್ಛಯದಲ್ಲಿ ನ್ಯಾಯಾಂಗ

ಇಲಾಖೆಯ ಬಿ ವರ್ಗ, ಸಿ ವರ್ಗ, ಮತ್ತು ಡಿ ವರ್ಗದ ಸಿಬ್ಬಂದಿಗಳಿಗೆ ವಸತಿ ಗೃಹಗಳನ್ನು ಆದ್ಯತೆಯ ಮೇರೆಗೆ ನಿರ್ಮಿಸಲಾಗಿದೆ ಎಂದರು.

ಸಚಿವ ಟಿ.ಬಿ. ಜಯಚಂದ್ರ ಅವರು ಮಾತನಾಡಿ ನ್ಯಾಯಾಂಗ ವ್ಯವಸ್ಥೆಯು ಮುಂದಿಡುವ ಎಲ್ಲ ಮನವಿಗಳನ್ನು ರಾಜ್ಯ ಸರ್ಕಾರ ಗೌರವಿಸಿ ಕಳೆದ ನಾಲ್ಕು ವರ್ಷದಿಂದ ಅನುಷ್ಠಾನ ಮಾಡಿದೆ ಎಂದರು.

ಭಾರತದ ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಶ್ರೀ ಮೋಹನ್ ಎಂ. ಶಾಂತನಗೌಡರ್ ಅವರು ಮಾತನಾಡಿ, ನ್ಯಾಯಾಂಗ ಇಲಾಖೆಯ ಈ ವಸತಿ ಸಮುಚ್ಚಯ ನೀರು, ವಿದ್ಯುತ್, ಮಳೆನೀರು ಕೊಯ್ಲು ಮುಂತಾದ ಸಕಲ ಸೌಕರ್ಯಗಳನ್ನು ಒಳಗೊಂಡಿದ್ದು, ಮೆಟ್ರೋ ನಿಲ್ದಾಣವನ್ನು ಸಮೀಪದಲ್ಲೇ ಒಳಗೊಂಡಿದೆ. ಇಷ್ಟೆಲ್ಲಾ ಸೌಲಭ್ಯಗಳನ್ನು ಒಳಗೊಂಡಿರುವ ಈ ವಸತಿ ಸಮುಚ್ಚಯದಲ್ಲಿ ವಾಸಿಸುವ ನೌಕರರು ಸಹಬಾಳ್ವೆಯಿಂದ ಜೀವನ ಮಾಡಬೇಕು ಎಂದು ಕಿವಿ ಮಾತು ಹೇಳಿದರು.

ಭಾರತದ ಸರ್ವೋಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಶ್ರೀ ಎಸ್. ಅಬ್ದುಲ್ ನಜೀರ್ ಅವರು ಮಾತನಾಡಿ, ನ್ಯಾಯಾಂಗ ಸಿಬ್ಬಂದಿಯ ಈ ವಸತಿ ಸಮುಚ್ಚಯದಲ್ಲಿ ಸಮುದಾಯ ಭವನ ಮತ್ತು ಮಕ್ಕಳ ಆಟದ ಮೈದಾನದ ಕೊರತೆ ಇದ್ದು ಮುಂದಿನ ದಿನಗಳಲ್ಲಿ ಈ ಸೌಕರ್ಯವನ್ನು ಒದಗಿಸಿಕೊಡುವಂತೆ ನ್ಯಾಯಾಂಗ ಇಲಾಖೆಯ ಸಿಬ್ಬಂದಿಯ ಪರವಾಗಿ ಸರ್ಕಾರಕ್ಕೆ ಮನವಿಮಾಡಿದರು.

ಮುಂದುವರೆದು ಅವರು ಮಾತನ್ನಾಡುತ್ತಾ, ರಾಜ್ಯ ಸರ್ಕಾರ ಒದಗಿಸಿರುವ ಈ ಅನುಕೂಲವನ್ನು ಆನಂದಿಸಿರಿ ಮತ್ತು ಜವಾಬ್ದಾರಿಯನ್ನು ಮರೆಯದಿರಿ ಎಂದು ನ್ಯಾಯಾಂಗ ಇಲಾಖೆಯ ನೌಕರರಿಗೆ ಕರೆ ನೀಡಿದರು.

ಕರ್ನಾಟಕ ಉಚ್ಚ ನ್ಯಾಯಾಲಯದ ಮುಖ್ಯ ನ್ಯಾಯಮೂರ್ತಿ ಶ್ರೀ ಸುಬ್ರೋ ಕಮಲ್ ಮುಖರ್ಜಿ ತಮ್ಮ ಅಧ್ಯಕ್ಷೀಯ ಭಾಷಣದಲ್ಲಿ, ಲೋಕೋಪಯೋಗಿ ಇಲಾಖೆ ಮತ್ತು ನ್ಯಾಯಾಂಗ ಇಲಾಖೆಯ ನೌಕರರು ಒಟ್ಟಾಗಿ ಸೇರಿ ಈ ವಸತಿ ಸಮುಚ್ಚಯದ ನಿರ್ವಹಣೆಯನ್ನು ಮಾಡಬೇಕು ಮತ್ತು ಕಟ್ಟಡವನ್ನು ಜತನದಿಂದ ಕಾಪಾಡಿಕೊಳ್ಳಬೇಕು ಎಂದು ಕರೆ ನೀಡಿದರು. ಬೆಂಗಳೂರಿನಂತ ಮಹಾನಗರದಲ್ಲಿ ಸ್ವಂತ ಮನೆಯನ್ನು ಹೊಂದುವುದು ಪ್ರತಿಯೊಬ್ಬ ಮಧ್ಯಮ ವರ್ಗದವರ ಕನಸಾಗಿದ್ದು, ನ್ಯಾಯಾಂಗ ಇಲಾಖೆಯ ಸಿಬ್ಬಂದಿಯವರಿಗೆ ಇಷ್ಟು ಅನುಕೂಲತೆಯುಳ್ಳ ವಸತಿ ಸಮುಚ್ಚಯವನ್ನು ನಿರ್ಮಿಸಿಕೊಟ್ಟಿರುವ ರಾಜ್ಯ ಸರ್ಕಾರವನ್ನು ನಿಮ್ಮೆಲ್ಲರ ಪರವಾಗಿ ಶ್ಲಾಘಿಸುತ್ತೇನೆ ಎಂದರು.

ಕಾರ್ಯಕ್ರಮದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಉಚ್ಚ ನ್ಯಾಯಾಲಯ ಕಟ್ಟಡ ಸಮಿತಿ ಅಧ್ಯಕ್ಷರಾದ ನ್ಯಾಯಮೂರ್ತಿ ಎ.ಎಸ್. ಬೋಪಣ್ಣ, ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಉಚ್ಚ ನ್ಯಾಯಾಲಯ ಕಟ್ಟಡ ಸಮಿತಿ ಸದಸ್ಯರಾದ ನ್ಯಾಯಮೂರ್ತಿ ರವಿ ಮಳಿಮಠ್, ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಉಚ್ಚ ನ್ಯಾಯಾಲಯ ಕಟ್ಟಡ ಸಮಿತಿ ಸದಸ್ಯರಾದ ನ್ಯಾಯಮೂರ್ತಿ ಪಿ.ಎಸ್. ದಿನೇಶ್‌ಕುಮಾರ್, ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಉಚ್ಚ ನ್ಯಾಯಾಲಯ ಕಟ್ಟಡ ಸಮಿತಿ ಸದಸ್ಯರಾದ ನ್ಯಾಯಮೂರ್ತಿ ಜಾನ್ ಮೈಕಲ್ ಕುನ್ಹಾ, ಲೋಕೋಪಯೋಗಿ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ, ಎನ್. ಲಕ್ಷ್ಮೀನಾರಾಯಣ, ಕಾರ್ಯದರ್ಶಿ ಎಸ್.ಬಿ. ಸಿದ್ದಗಂಗಪ್ಪ ಸೇರಿದಂತೆ ವಿವಿಧ ಅಧಿಕಾರಿಗಳು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

ಮಮತ/ಕೆಎಂ